# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎಸ್.ಆರ್.ವೃತ್ತ, ಬೆಂಗಳೂರು –02.**

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/20/2020-21 ದಿನಾಂಕ: 23-02-2021.

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಆಸ್ತಿ ಸಂಖ್ಯೆ 1, ಪಿಐಡಿ ಸಂಖ್ಯೆ 63–79–1, ಬನ್ನೇರಘಟ್ಟ ರಸ್ತೆ, ಡೈರಿ ವೃತ್ತ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 152, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ Research Block ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 01-12-2020.
2) ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD South/0049/19-20 ದಿ: 01-08-2020.
3) ಮಾನ್ಯ ಆಯುಕ್ತರು ರವರ ಅನುಮೋದನೆ ದಿನಾಂಕ: 17-02-2021.

*****

ಆಸ್ತಿ ಸಂಖ್ಯೆ 1, ಪಿಐಡಿ ಸಂಖ್ಯೆ 63–79–1, ಬನ್ನೇರಘಟ್ಟ ರಸ್ತೆ, ಡೈರಿ ವೃತ್ತ, ದಕ್ಷಿಣ ವಲಯ. ವಾರ್ಡ್ ಸಂಖ್ಯೆ 152, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ 2ತಳ+ನೆಲ+ಮೇಲಿನ 7 ಅಂತಸ್ತುಗಳ Research Block ಕಟ್ಟಡ, ಈಗಾಗಲೇ ಹಾಸ್ಟಲ್ ಕಟ್ಟಡ ಮತ್ತು ಕಾಲೇಜ್ ಕಟ್ಟಡಕ್ಕೆ ತಳ+ನೆಲ+ ಮೇಲಿನ 4 ಅಂತಸ್ತುಗಳಿಗೆ ನಕ್ಷೆ ಮಂಜೂರಾತಿ ಪಡೆಯಲಾಗಿದ್ದು, ಸದರಿ ಕಟ್ಟಡಗಳ ಮೇಲೆ ಹೆಚ್ಚುವರಿಯಾಗಿ 5ನೇ, 6ನೇ ಮತ್ತು 7ನೇ ಅಂತಸ್ತನ್ನು ನಿರ್ಮಾಣ ಮಾಡುವ ಉದ್ದೇಶಕ್ಕೆ ಈ ಕಛೇರಿಯಿಂದ ಎಲ್.ಪಿ. ಸಂಖ್ಯೆ: BBMP/Addl.Dir/JD South/0049/19-20 ದಿನಾಂಕ: 01–08–2020 ರಂದು ಪರಿಷ್ಕೃತ ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ. ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, Research Block ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 10-11-2020 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಮಾನ್ಯ ಆಯುಕ್ತರು ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 8,72,000/–ಗಳನ್ನು ಅರ್ಜಿದಾರರಿಂದ ರಶೀದಿ ಸಂಖ್ಯೆ: RE-ifms624-TP/000104 ದಿನಾಂಕ: 23-02-2021 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ Research Block ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

23/2/2021

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/02/2021 22/02/2021

4) Research Block ಕಟ್ಟಡಕ್ಕೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯುವ ಮುನ್ನ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ರವರ ಮಾರ್ಪಡಿತ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು.

5) Research Block ಕಟ್ಟಡಕ್ಕೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯುವ ಮುನ್ನ ರಾಜ್ಯ ಪರಿಸರ ತೀರುವಳಿ ಸಮಿತಿ ರವರ ನಿರಾಕ್ಷೇಪಣಾ ಪತ್ರ ಮತ್ತು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು.

6) Research Block ಕಟ್ಟಡಕ್ಕೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯುವ ಮುನ್ನ ರಸ್ತೆ ಅಗಲೀಕರಣ 3390.86 ಚ.ಮೀ ವಿಸ್ತೀರ್ಣವನ್ನು ಪಾಲಿಕೆಗೆ ಉಚಿತವಾಗಿ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸುವುದು.

7) ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ಪರಿಷ್ಕೃತ ನಕ್ಷೆ ಮಂಜೂರಾತಿ / ಪ್ರಾರಂಭಿಕ ಪ್ರಮಾಣಪತ್ರ ರದ್ದುಗೊಳ್ಳುತ್ತದೆ.

8) ಪರಿಷ್ಕೃತ ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

9) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

10) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.

11) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

12) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s. Christ University
Hosur Road
Bangalore – 560 029.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ ಲೇಔಟ್ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

23/2/2021

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/2/2021 22/02/2021 23/02/2021